ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ನೇಮಕಾತಿಯಲ್ಲಿ ಅಕ್ರಮ ವೆಸಗಿರುವ ಕುರಿತು

ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

239 (294) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿಯಲ್ಲಿ ಸರ್ಕಾರದ ಆದೇಶಗಳನ್ನು ಉಲ್ಲಂಘಿಸಿ ನೇಮಕಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸರ್ಕಾರವು ಶ್ರೀ ಮುನೇಶ್ ಮುದಗಲ್ ಅವರ ಅಧ್ಯಕತೆಯಲ್ಲಿ ದಿ:03.03.2018ರಂದು ಒಂದು ಸಮಿತಿ ಮಾಡಿದ್ದು, ಅದು ಯಾವ ಹಂತದಲ್ಲಿದೆ;

(ಇ) ನೇಮಕಾತಿಯಲ್ಲಿ ಅಕ್ರಮವೆಸಗಿರುವ ಅಧಿಕಾರಿಗಳ ಮೇಲೆ ಮತ್ತು ನೇಮಕಾತಿ ಪಡೆದವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು?